## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ಹಿರಿಯೂರು.

## ಸಿ.ಸಿ ಸಂಖ್ಯೆಃ 145/2024

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಚಂದ್ರಪ್ಪ. ಜಿ | ಸಿಡಬ್ಲ್ಯೂ-16 |
| ತಂದೆಯ/ಗಂಡನ ಹೆಸರು | - | ಗೇಮ್ಯಾನಾಯ್ಕ | ಪಿಡಬ್ಲ್ಯೂ-9 |
| ವಯಸ್ಸು | - | ಸು. 46 ವರ್ಷ | ಪ್ರ.ವ.ಬೋ<br>ದಿನಾಂಕಃ16.10.2025 |
| ಉದ್ಯೋಗ | - | ಸಹಾಯ ಆರಕ್ಷಕ ಉಪ ನಿರೀಕ್ಷಕರು, ಹಿರಿಯೂರು ನಗರ ಪೊಲೀಸ್ ಠಾಣೆ | |
| ವಾಸ | - | ಹಿರಿಯೂರು. | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ-**

1. ನಾನು 2017 ರಿಂದ ಆಗಸ್ಟ್-2024 ರವರೆಗೆ ಮುಖ್ಯ ಪೇದೆಯಾಗಿ ನಂತರ ಜುಲೈ-2025 ರಿಂದ ಇಲ್ಲಿಯವರೆಗೆ ಹಿರಿಯೂರು ನಗರ ಪೊಲೀಸ್ ಠಾಣೆಯಲ್ಲಿ ಸಹಾಯ ಆರಕ್ಷಕ ಉಪ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿನಾಂಕಃ01.11.2022 ರಂದು ಬೆಳಗ್ಗೆ 8.45 ಗಂಟೆಗೆ ಠಾಣಾ ಪ್ರಭಾರದಲ್ಲಿರುವಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ನಿಪಿ-1 ಲಿಖಿತ ದೂರಿನ ಆಧಾರದ ಮೇಲೆ ಪ್ರಕರಣವನ್ನು ಠಾಣಾ ಮೊಕದ್ದಮೆ ಸಂಖ್ಯೆ215/2022 ರಂತೆ ಪ್ರಕರಣ ದಾಖಲು ಮಾಡಿಕೊಂಡಿರುತ್ತೇನೆ. ನಿಪಿ-1 ರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ಘನ ನ್ಯಾಯಾಲಯಕ್ಕೂ ಮತ್ತು ನಮ್ಮ ಇಲಾಖಾ ಮೇಲಾಧಿಕಾರಿಗಳಿಗೂ ಕಳುಹಿಸಿಕೊಟ್ಟಿರುತ್ತೇನೆ. ಸಾಕ್ಷಿಗೆ ಪ್ರಥಮ ವರ್ತಮಾನ ವರದಿಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ **ನಿಪಿ-18** ಎಂದು,

ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ–18(ಎ)** ಎಂದು ಗುರುತಿಸಲಾಯಿತು. ನಂತರ ಪ್ರಕರಣವು ಘೋರ ಪ್ರಕರಣವಾಗಿದ್ದರಿಂದ ಪ್ರಕರಣದ ಕಡತವನ್ನು ಚಾಸಾ–18 ರವರಿಗೆ ಮುಂದಿನ ತನಿಖೆಗಾಗಿ ಹಸ್ತಾಂತರಿಸಿರುತ್ತೇನೆ.

**ಪಾಟೀ–ಸವಾಲುಃ 1 ಮತ್ತು 2 ನೇ ಆರೋಪಿತರ ಪರ ಶ್ರೀ ಎಂ.ಆರ್.ಪಿ. ವಕೀಲರಿಂದಃ–**

3. ನಾನು ಹೇಳುವಂತೆ ದಿನಾಂಕಃ01.11.2022 ರಂದು ಚಾಸಾ–1 ರವರು ಪೊಲೀಸ್ ಠಾಣೆಗೆ ಹಾಜರಾಗಿಲ್ಲ ಮತ್ತು ಯಾವುದೇ ದೂರನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ., ಹಿರಿಯೂರು.